ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕೋವಿಡ್-19ಗೆ ರೈಲು ಬೋಗಿಗಳನ್ನು ಬೆಡ್‌ಗಳಾಗಿ ನಿರ್ಮಿಸಿರುವ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) -

60 (161) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಕೋವಿಡ್ -19 ಸಾಂಕ್ರಮಿಕ ರೋಗವನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ದೇಶ್ಯಾದ್ಯಂತ ಎಲ್ಲ ರಾಜ್ಯಗಳಲ್ಲಿಯೂ ರೈಲು ಬೋಗಿಗಳಲ್ಲಿ ಸುಸಜ್ಜಿತ ಬೆಡ್ ಹಾಗೂ ವೈದ್ಯಕೀಯ ಸಲಕರಣೆಗಳನ್ನೊಳಗೊಂಡ ರೈಲ್ವೆ ಆಸ್ಪತ್ರೆಗಳನ್ನು ನಿರ್ಮಿಸಲಾಗಿದೆ ಎಂದು ಹೇಳಿರುವುದು ನಿಜವೇ;

(ಆ) ರಾಜ್ಯಾದ್ಯಂತ ಒಟ್ಟು ಎಷ್ಟು ರೈಲು ಬೋಗಿಗಳಲ್ಲಿ ಕೋವಿಡ್ ಕೇರ್ ಸೆಂಟರ್‌ಗಳನ್ನು ತೆರೆಯಲಾಗಿದೆ ; ಪ್ರತಿ ಕೋವಿಡ್ ಕೇರ್ ಸೆಂಟರ್ ರೈಲು ಬೋಗಿಗಳಲ್ಲಿ ಚಿಕಿತ್ಸೆ ಪಡೆದ ರೋಗಿಗಳ ಸಂಖ್ಯೆ ಎಷ್ಟು;

(ಇ) ಪ್ರತಿ ಕೋವಿಡ್ ಕೇರ್ ಸೆಂಟರ್ ರೈಲು ಬೋಗಿಗೆ ಎಷ್ಟು ಜನ, ವೈದ್ಯರು ಹಾಗೂ ಇತರೆ ಸಿಬ್ಬಂದಿಗಳನ್ನು ನಿಯೋಜಿಸಲಾಗಿತ್ತು; ಕೋವಿಡ್ ಕೇರ್ ಸೆಂಟರ್ ರೈಲು ಬೋಗಿಗೆ ಖರ್ಚಾದ ಒಟ್ಟು ಮೊತ್ತವೆಷ್ಟು?